ಇ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಕುಮಟಾ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಸರ್ಕಾರಿ ಶಾಲಾ ಕಾಲೇಜುಗಳ ಕಟ್ಟಡಗಳ ಸಂಖ್ಯೆ:

	ಪ್ರಾಥಮಿಕ	ಪ್ರೌಢ	ಪದವಿ ಪೂರ್ವ	ಪದವಿ
ಶಾಲಾ/ಕಾಲೇಜುಗಳ ಸಂಖ್ಯೆ	301	10	4	02
ಕಟ್ಟಡಗಳ ಸಂಖ್ಯೆ (ಕೊಠಡಿಗಳು)	1185	57	31	–

ಆ) ಕುಮಟಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಒಟು 4 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ನಬಾರ್ಡ್ ಅನುದಾನದ ಆರ್.ಐ.ಡಿ.ಎಫ್ ಕಾರ್ಯಕ್ರಮದ ವಿವಿಧ ಯೋಜನೆ ಅಡಿ ಒಟ್ಟು 31 ಕೊಠಡಿಗಳ ನಿರ್ಮಾಣ ಕಾರ್ಯವನ್ನು ಕೈಗೊಂಡಿದ್ದು ಅವುಗಳಲ್ಲಿ 19 ಕೊಠಡಿಗಳ ನಿರ್ಮಾಣ ಕಾರ್ಯವು ಪೂರ್ಣಗೊಂಡು ಕಾಲೇಜಿನ ಬಳಕೆಯಲ್ಲಿದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಕೊಠಡಿಗಳನ್ನು ಒದಗಿಸಲು ಕ್ರಮ ವಹಿಸಲಾಗುವುದು.

ಪದವಿ ಕಾಲೇಜಿಗೆ ಸಂಬಂಧಿಸಿದಂತೆ ನಿವೇಶನದ ಲಭ್ಯತೆಯಿಲ್ಲದಿರುವುದರಿಂದ ಕಟ್ಟಡಗಳನ್ನು ಕಟ್ಟಲಾಗಿರುವುದಿಲ್ಲ. ನಿವೇಶನ ದೊರೆತ ಕೂಡಲೇ ಕಟ್ಟಡ ನಿರ್ಮಿಸಲು ಕ್ರಮ ವಹಿಸಲಾಗುವುದು.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಹುನಗುಂದ ತಾಲ್ಲೂಕಿನ ಹೊಸ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡ

680 (1035) ಶ್ರೀ ದೊಡ್ಡನಗೌಡ ಗುಂಡನಗೌಡ ಪಾಟೀಲ್ (ಹುನಗುಂದ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುನಗುಂದ ತಾಲ್ಲೂಕಿನಲ್ಲಿ ಹುನಗುಂದ, ಗುಡೂರ, ಮತ್ತು ಇಲಕಲ್‌ನ ಹೊಸ ಪದವಿ ಪೂರ್ವ ಕಾಲೇಜು ಹಾಗೂ ಇಳಕಲ್ ಬಾಲಕಿಯರ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು), ವಿದ್ಯಾರ್ಥಿಗಳು ಹೆಚ್ಚಾಗಿದ್ದು ಕೊಠಡಿಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಂಡಿದೆಯೇ;

ಆ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಅನುಪಾತದಲ್ಲಿ ಕೊಠಡಿಯ ಕೊರತೆಯನ್ನು ನೀಗಿಸುವಲ್ಲಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹುನಗುಂದ ತಾಲ್ಲೂಕಿನಲ್ಲಿ ಹುನಗುಂದ, ಗುಡೂರ, ಮತ್ತು ಇಲಕಲ್‌ನ ಹೊಸ ಪದವಿ ಪೂರ್ವ ಕಾಲೇಜು ಹಾಗೂ ಇಳಕಲ್ ಬಾಲಕಿಯರ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸಕ್ತ ವರ್ಷದಲ್ಲಿ (2011–12) ಇರುವ ವಿದ್ಯಾರ್ಥಿಗಳ ಸಂಖ್ಯೆಯ ವಿವರ ಈ ಕೆಳಕಂಡಂತಿದೆ.

ಕ್ರ.ಸಂ.	ಕಾಲೇಜಿನ ಹೆಸರು	ವಿದ್ಯಾರ್ಥಿಗಳ ಸಂಖ್ಯೆ
1	ಸ.ಪ.ಪೂ.ಕಾಲೇಜು ಹುನಗುಂದ	226
2	ಸ.ಪ.ಪೂ.ಕಾಲೇಜು ಗುಡೂರು	221
3	ಸ.ಪ.ಪೂ.ಕಾಲೇಜು ಇಳಕಲ್	439
4	ಬಾಲಕಿಯರ ಸ.ಪ.ಪೂ.ಕಾಲೇಜು ಇಳಕಲ್	289

ನಬಾರ್ಡ್ ಸಹಯೋಗದ ಆರ್.ಐ.ಡಿ.ಎಫ್ ಹಾಗೂ ಅಪೆಂಡಿಕ್ಸ್–ಇ ಯೋಜನೆಯಡಿ ಕೊಠಡಿಗಳ ನಿರ್ಮಾಣ ಮಾಡಲಾಗಿದ್ದು, ಕೊಠಡಿಗಳ ವಿವರ ಈ ಕೆಳಕಂಡಂತಿದೆ.

ಕ್ರ.ಸಂ.	ಕಾಲೇಜಿನ ಹೆಸರು	ಕೊಠಡಿಗಳ ಸಂಖ್ಯೆ
1	ಸ.ಪ.ಪೂ.ಕಾಲೇಜು ಹುನಗುಂದ	01
2	ಸ.ಪ.ಪೂ.ಕಾಲೇಜು ಗುಡೂರು	02
3	ಸ.ಪ.ಪೂ.ಕಾಲೇಜು ಇಳಕಲ್	06
4	ಬಾಲಕಿಯರ ಸ.ಪ.ಪೂ.ಕಾಲೇಜು ಇಳಕಲ್	03

ಆ) ನಬಾರ್ಡ್ ಸಹಯೋಗದ ಆರ್.ಐ.ಡಿ.ಎಫ್ ಹಾಗೂ ಅಪೆಂಡಿಕ್ಸ್-ಇ ಯೋಜನೆಯಡಿ ಕೊಠಡಿಗಳ ನಿರ್ಮಾಣ ಮಾಡಲಾಗುತ್ತಿದೆ. ಅನುದಾನದ ಲಭ್ಯತೆಯನ್ನು ಅನುಸರಿಸಿ ಹಂತ ಹಂತವಾಗಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.

ಇಂಡಿ ಮತಕ್ಷೇತ್ರದ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ

681 (663) ಡಾ: ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಪದವಿ ಪೂರ್ವ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು; ಅವು ಯಾವ ಯಾವ ಗ್ರಾಮಗಳಲ್ಲಿ ಇವೆ(ಮಾಹಿತಿ ನೀಡುವುದು);

ಆ) ಬಿಜಾಪುರ ಜಿಲ್ಲೆಯಲ್ಲಿಯ ಪದವಿ ಪೂರ್ವ ಮಹಾವಿದ್ಯಾಲಯಗಳಲ್ಲಿರುವ ಬೋಧಕ ಸಿಬ್ಬಂದಿಯನ್ನು ಒಂದು ಮಹಾವಿದ್ಯಾಲಯದಿಂದ ಮತ್ತೊಂದು ಮಹಾವಿದ್ಯಾಲಯಕ್ಕೆ ನಿಯೋಜನೆ ಮಾಡುವ ಪ್ರವೃತ್ತಿ ಹೆಚ್ಚಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಪ್ರಸಕ್ತ ವರ್ಷದಲ್ಲಿ ಎಷ್ಟು ಬೋಧಕ ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ (ವಿವರ ನೀಡುವುದು);

ಈ) ಈ ಸಿಬ್ಬಂದಿಯವರನ್ನು ಯಾವ ಮಹಾವಿದ್ಯಾಲಯದಿಂದ ಯಾವ ಮಹಾವಿದ್ಯಾಲಯಕ್ಕೆ ನಿಯೋಜಿಸಿದೆ ಎಂಬುದರ ಮಾಹಿತಿ ನೀಡುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಿಜಾಪುರ ಜಿಲ್ಲೆಯಲ್ಲಿ ಒಟ್ಟು 153 ಪದವಿ ಪೂರ್ವ ಕಾಲೇಜುಗಳಿವೆ. (ಕಾಲೇಜುಗಳ ಮಾಹಿತಿ ಪಟ್ಟಿ ಲಗತ್ತಿಸಿದೆ)

ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಯ ಕಾರ್ಯಭಾರವನ್ನು ಸರಿದೂಗಿಸುವ ಮತ್ತು ವಿದ್ಯಾರ್ಥಿಗಳಿಗೆ ಪಾಠ ಪ್ರವಚನವನ್ನು ಒದಗಿಸುವ ದೃಷ್ಟಿಯಿಂದ ಕಡಿಮೆ ಕಾರ್ಯಭಾರ ಹೊಂದಿರುವ ಉಪನ್ಯಾಸಕರುಗಳು ಕಾರ್ಯಭಾರ ಇರುವ